# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 27 |
| ಸದಸ್ಯರ ಹೆಸರು | : | ಶ್ರೀ ಕೆ.ಪ್ರತಾಪಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.02.2024 |
| ಉತ್ತರಿಸುವ ಸಚಿವರು | : | ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮೆ ಸಚಿವರು. |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕರ್ನಾಟಕ ಕರಾವಳಿಯಲ್ಲಿ ವಿಶೇಷವಾಗಿ ಗುರುತಿಸಿಕೊಂಡಿರುವ ಹೆಂಚು ಉದ್ಯಮ ತೀವ್ರ ಕುಸಿತ ಕಂಡು, ಹೆಂಚಿನ ಕಾರ್ಖಾನೆಗಳು ಮುಚ್ಚುವ ಹಂತ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ) | ಬಂದಿದ್ದಲ್ಲಿ, ರಾಜ್ಯದ ಉಡುಪಿ ಹಾಗೂ ಮಂಗಳೂರು ಜಿಲ್ಲೆಯಲ್ಲಿ ವಿಶೇಷವಾಗಿ ಆವೆ ಮಣ್ಣಿನ ಹೆಂಚು ನಿರ್ಮಾಣಗೊಳ್ಳುತ್ತಿದ್ದು, ಮಾರುಕಟ್ಟೆಯಲ್ಲಿ ಸದರಿ ಹೆಂಚುಗಳಿಗೆ ಬೇಡಿಕೆ ಕಡಿಮೆಯಾಗಿ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಹೆಂಚು ಉದ್ಯಮದ ಪುನಶ್ಚೇತನಕ್ಕೆ ಸರ್ಕಾರ ಇದುವರೆಗೆ ತೆಗೆದುಕೊಂಡ ಕ್ರಮಗಳೇನು; | ಹೆಂಚು ಉತ್ಪಾದನಾ ಕೈಗಾರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹಾಗೂ ಆರ್ಥಿಕವಾಗಿ ನೆರವು ನೀಡಲು ಸರ್ಕಾರ ಈ ಕೆಳಗಿನ ಕ್ರಮಗಳನ್ನು ವಹಿಸಿದೆ.<br><br>1. ಈ ಕೈಗಾರಿಕೆಗಳು ಕಾಲ ಕಾಲ ಬದಲಾಗುವ ತಂತ್ರಜ್ಞಾನ ಅಳವಡಿಸಿಕೊಳ್ಳಲು ಅನುಕೂಲವಾಗುವಂತೆ ಕೈಗಾರಿಕಾ ನೀತಿ 2020-25 ರಲ್ಲಿ ತಂತ್ರಜ್ಞಾನ ಉನ್ನತೀಕರಣಕ್ಕೆ ಕೈಗಾರಿಕೆಗಳು ಪಡೆಯುವ ಸಾಲಕ್ಕೆ ಶೇ 5-6% ಬಡ್ಡಿ ಸಹಾಯಧನವನ್ನು ನೀಡಲಾಗುತ್ತಿದೆ.<br><br>2. ಹೊಸ ಕೈಗಾರಿಕಾ ನೀತಿ 2020-25 ರಡಿಯಲ್ಲಿ ಹೊಸ ಬಂಡವಾಳ ಹೂಡಿಕೆಗೆ (ಹೊಸ ಘಟಕ, ವಿಸ್ತರಣಾ ಘಟಕ, ವೈವಿಧ್ಯೀಕರಣ ಘಟಕ, ಆಧುನೀಕರಣ ಘಟಕಕ್ಕೆ) ಒಟ್ಟು ಸ್ಥಿರಾಸ್ತಿಯ ಶೇ 25% ರಿಂದ ಶೇ 35% ರಷ್ಟು ಗರಿಷ್ಠ ರೂ.1.05 ಕೋಟಿ ಬಂಡವಾಳ ಹೂಡಿಕೆ ಸಹಾಯಧನ ನೀಡಲಾಗುತ್ತಿದೆ.<br><br>3. ಹೊಸ ಬಂಡವಾಳ ಹೂಡಿಕೆಗೆ ಶೇ 75% ರಿಂದ ಶೇ 100% ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೊಂದಣಿ ಶುಲ್ಕ ರಿಯಾಯಿತಿಯನ್ನು ನೀಡಲಾಗುತ್ತಿದೆ.<br><br>4. ಭೂ ಪರಿವರ್ತನೆ ಶುಲ್ಕವನ್ನು ಶೇ 75 ರಿಂದ ಶೇ 100% ರಷ್ಟು ಮರುಪಾವತಿ ಮಾಡಲಾಗುತ್ತಿದೆ.<br><br>5. ವಿದ್ಯುತ್ ತೆರಿಗೆ ವಿನಾಯಿತಿಯನ್ನು ಶೇ 100% |
| ಇ) | ಹೆಂಚುಗಳ ಖರೀದಿ ಕ್ಷೀಣಿಸುವುದರ ಜೊತೆಗೆ ಕಚ್ಚಾ ವಸ್ತುಗಳ ಅಲಭ್ಯತೆ ದರ ಏರಿಕೆ, ಕಚ್ಚಾ ವಸ್ತುಗಳಿಗೆ ಇನ್‌ಪುಟ್ ಕ್ಲೈಮ್ ಇಲ್ಲದಿರುವುದು ಆವೆ ಮಣ್ಣು ದರ ಹೆಚ್ಚಳ ಸೇರಿದಂತೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ಹೆಂಚು ಉದ್ಯಮವನ್ನು ಉಳಿಸುವ ನಿಟ್ಟಿನಲ್ಲಿ ಹೆಂಚಿನ ಕಾರ್ಖಾನೆಗಳು ಪ್ರಸ್ತುತ ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಹಾಗೂ ಆರ್ಥಿಕವಾಗಿ ಹೆಚ್ಚಿನ ನೆರವು ನೀಡಲು ಸರ್ಕಾರ ಈ ಕೂಡಲೇ ಸೂಕ್ತ ಕ್ರಮ ವಹಿಸುವುದೇ? | |

| | | |
|---|---|---|
| | | ಗರಿಷ್ಟ 4 ರಿಂದ 8 ವರ್ಷಗಳವರೆ ನೀಡಲಾಗುತ್ತಿದೆ.<br><br>6. ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಅವು ಬಳಸಿದ ಪ್ರತಿ ಯುನಿಟ್‌ಗೆ ರೂ 1 ರಂತೆ 3 ವರ್ಷಗಳ ಕಾಲ ವಿದ್ಯುತ್ ಸಹಾಯಧನವನ್ನು ನೀಡಲಾಗುತ್ತಿದೆ. |

**ಸಿಐ 11 ಎಸ್ ಎಸ್ ಐ 2024**

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು